ಕರ್ನಾಟಕ ವಿಧಾನ ಸಭೆ

ಮಂಗಳವಾರ ೨೮ನೇ ಮಾರ್ಚ್ ೧೯೬೯

ಸದನವು ವಿಧಾನಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ ೧೧-೦೫ ಗಂಟೆಗೆ ಸಮಾವೇಶಗೊಂಡಿತು.

ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್‌ರವರು) ಪೀಠವನ್ನು ಅಲಂಕರಿಸಿದ್ದರು.

ಶಾಸನ ರಚನಾ ಕಾರ್ಯಕಲಾಪಗಳು

ಅಧ್ಯಕ್ಷರು.—ಈಗ ವಿಧೇಯಕವನ್ನು ಮಂಡಿಸುವುದು

೧೯೬೯ರ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಪ್ರೊ॥ ಎ. ಲಕ್ಷ್ಮೀಸಾಗರ್.—ಮಾನ್ಯ (ಕಾನೂನು ಮಂತ್ರಿಗಳು) (ಕಂದಾಯ ಮಂತ್ರಿಗಳ ಪರವಾಗಿ).—ಸನ್ಮಾನ್ಯ ಅಧ್ಯಕ್ಷರೆ, ೧೯೬೯ನೇ ಇಸವಿಯ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ: ''೧೯೬೯ನೇ ಇಸವಿಯ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಪ್ರೊ ಎ. ಲಕ್ಷ್ಮೀಸಾಗರ್ (ಕಾನೂನು ಮಂತ್ರಿಗಳು).—ಮಾನ್ಯ ಅಧ್ಯಕ್ಷರೆ, ''೧೯೬೯ನೇ ಇಸವಿಯ ಕರ್ನಾಟಕ ಭೂ ಸುಧಾರಣಾ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.''

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.
೧೯೬೯ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ(ತಿದ್ದುಪಡಿ) ವಿಧೇಯಕ ಪರ್ಯಾಲೋಚನಾ ಪ್ರಸ್ತಾವ

ಪ್ರೊ॥ ಎ. ಲಕ್ಷ್ಮೀಸಾಗರ್ (ಮಾನ್ಯ ಕಾನೂನು ಮಂತ್ರಿಗಳು).— ಸನ್ಮಾನ್ಯ ಅಧ್ಯಕ್ಷರೆ, ೧೯೬೯ನೇ ಇಸವಿಯ ಕರ್ನಾಟಕ ಮಾರಾಟ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.

ಡಾ॥ ಹೆಚ್. ಎಲ್. ತಿಮ್ಮೇಗೌಡ.—ಮಾನ್ಯ ಅಧ್ಯಕ್ಷರೆ, ನನ್ನದು ಪಾಯಿಂಟ್ ಆಫ್ ಆರ್ಡರ್ ಇದೆ. ಈಗ ೬ ತಿಂಗಳಿಗೆ ಮಾತ್ರ ಓಟ್ ಆನ್ ಅಕೌಂಟ್ ಪಂಜೂರು ಮಾಡಿದ್ದೀವೆ, ಬಜೆಟ್‌ನಲ್ಲಿ ರತಕ್ಕಂಥ ಪ್ರಪೋಸಲ್ಸ್‌ನ ಆಧಾರದ ಮೇಲೆ ಬಿಲ್‌ಗಳನ್ನು ಮಾಡಿದ್ದೀವೆಂದು ಹೇಳಿದ್ದಾರೆ. ಪ್ರಪೋಸಲ್ಸ್ ಏನು ಕೊಟ್ಟಿದ್ದಾರೆ ಅದು ಅಪ್ರೂವ್ ಆಗುತ್ತದೆಯೇ ಬದಲಾವಣೆಯಾಗುತ್ತದೆಯೇ ಗೊತ್ತಿಲ್ಲ. ಇವತ್ತು ಬಿಲ್‌ಗಳನ್ನು ಪಾಸ್ ಮಾಡಿದರೆ ಮುಂದೆ ೩ ತಿಂಗಳಾದಮೇಲೆ ಅದಕ್ಕೆ ಅಮೆಂಡ್‌ಮೆಂಟಾದರೆ ಆಗ ಅಭಾಸವಾಗುತ್ತದೆ, ಮತ್ತು ಪುನಃ ಪರಿಶೀಲನೆ ಮಾಡಬೇಕಾದ ಪರಿಸ್ಥಿತಿ ಬರುತ್ತವೆ. ಆದ್ದರಿಂದ ಬಜೆಟ್ ಪೂರ್ಣವಾಗಿ ಅಪ್ರೂವ್ ಆದಮೇಲೆ

ಶ್ರೀ ಎಂ. ಎಸ್. ನಾರಾಯಣರಾವ್.—ಅಧ್ಯಕ್ಷರೆ, ನಮ್ಮ ಪಾಯಿಂಟ್ ಆಫ್ ಆರ್ಡರ್‌ಗೆ ಸರಿಯಾದ ಉತ್ತರ ಬರಲಿಲ್ಲ,

ಅಧ್ಯಕ್ಷರು.—ಪಾಯಿಂಟೂ ಇಲ್ಲ, ಆರ್ಡರೂ ಇಲ್ಲ, ದಯವಿಟ್ಟು ಕುಳಿತುಕೊಳ್ಳಿ.